ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1560
ಸದಸ್ಯರ ಹೆಸರು : ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 18.03.2021
ಉತ್ತರಿಸುವ ಸಚಿವರು : ಮುಖ್ಯಮಂತ್ರಿಗಳು

*****

	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿ ಕಳೆದ 02 ವರ್ಷಗಳಿಂದ ಸೌಭಾಗ್ಯ ಮತ್ತು ಭಾಗ್ಯಜ್ಯೋತಿ ಯೋಜನೆಗಳು ನೆನೆಗುದಿಗೆ ಬಿದ್ದಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; ಪ್ರಸ್ತುತ ಯೋಜನೆಗಳು ನೆನೆಗುದಿಗೆ ಬೀಳಲು ಕಾರಣಗಳೇನು:	ಪ್ರಸ್ತುತ, ವಿದ್ಯುತ್ ಸರಬರಾಜು ಕಂಪನಿಗಳ ವ್ಯಾಪ್ತಿಯಲ್ಲಿ ಭಾಗ್ಯಜ್ಯೋತಿ ಯೋಜನೆಯು ಜಾರಿಯಲ್ಲಿರುವುದಿಲ್ಲ. **ಸೌಭಾಗ್ಯ ಯೋಜನೆ:** • ರಾಜ್ಯದ ಈ ಕೆಳಕಂಡ ವಿದ್ಯುತ್ ಸರಬರಾಜು ಕಂಪನಿಗಳ ವ್ಯಾಪ್ತಿಯಲ್ಲಿ ಕೇಂದ್ರ ಸರ್ಕಾರದ ಸೌಭಾಗ್ಯ ಯೋಜನೆಯು ಈ ಹಿಂದೆ ಜಾರಿಗೊಂಡಿದ್ದ ವಿವರಗಳು:- (ಕೆಳಗಿನ ಕೋಷ್ಟಕ) • ಸೌಭಾಗ್ಯ ಯೋಜನೆಯನ್ನು ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ವ್ಯಾಪ್ತಿಯಲ್ಲಿ ಅನುಷ್ಠಾನಗೊಳಿಸಿರುವುದಿಲ್ಲ.
ಆ)	ರಾಜ್ಯದಲ್ಲಿ ಸೌಭಾಗ್ಯ ಮತ್ತು ಭಾಗ್ಯಜ್ಯೋತಿ ಯೋಜನೆಗಳನ್ನು ಪುನಃ ಪ್ರಾರಂಭಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?	ಸೌಭಾಗ್ಯ ಯೋಜನೆಯು ಕೇಂದ್ರ ಪುರಸ್ಕೃತ ಯೋಜನೆಯಾಗಿದ್ದು, ಕೇಂದ್ರ ಸರ್ಕಾರದ ಆದೇಶದಂತೆ ಡಿಸೆಂಬರ್ 2020 ರ ಅಂತ್ಯದೊಳಗೆ ವಿದ್ಯುತ್ ಸರಬರಾಜು ಕಂಪನಿಗಳಲ್ಲಿ ಯೋಜನೆಯ ಕಾಮಗಾರಿಗಳು ಪೂರ್ಣಗೊಂಡಿರುತ್ತವೆ. ಸದರಿ ಯೋಜನೆಗಳನ್ನು ಪುನಃ ಕೈಗೊಳ್ಳುವ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ.

ವಿದ್ಯುತ್ ಸರಬರಾಜು ಕಂಪನಿ ಹೆಸರು	ಫಲಾನುಭವಿಗಳ ಸಂಖ್ಯೆ	ಯೋಜನೆಯು ಅಂತ್ಯಗೊಂಡ ವರ್ಷ
ಮೆಸ್ಕಾಂ	5670	ಆಗಸ್ಟ್ 2019
ಹೆಸ್ಕಾಂ	80011	ಮಾರ್ಚ್ 2020
ಜೆಸ್ಕಾಂ	62804	ಮಾರ್ಚ್ 2020
ಸೆಸ್ಕ್	4138	ಡಿಸೆಂಬರ್ 2020
ಒಟ್ಟು	152623	

ಸಂಖ್ಯೆ: ಎನರ್ಜಿ 83 ಇಬಿಎಸ್ 2021

(ಬಿ.ಎಸ್.ಯಡಿಯೂರಪ್ಪ)
ಮುಖ್ಯಮಂತ್ರಿ